# ವಾರ್ಡ್ ಹಂತದ ಸಮಿತಿ ಸಭೆ

## ವಾರ್ಡ್ ಸಂಖ್ಯೆ: 136

06-03-2021 ರಂದು ಶನಿವಾರ ಬೆಳಿಗ್ಗೆ 11.00 ಘಂಟೆಗೆ ವಾರ್ಡ್ ಸಂಖ್ಯೆ: 136 ಜೆ.ಜೆ.ಆರ್ ನಗರ ವಾರ್ಡ್ ಹಂತದ ಸಮಿತಿ ಸಭೆಯನ್ನು ಡಾ॥ ಅಲ್ಲಮಪ್ರಭು. ಸಹಾಯಕ ನಿರ್ದೇಶಕರು, (ಪಶುಪಾಲನೆ-ಪಶ್ಚಿಮ) ಬಿ.ಬಿ.ಎಂ.ಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡ್‌ನ ನೋಡೆಲ್ ಅಧಿಕಾರಿ ವಾರ್ಡ್ ಸಂಖ್ಯೆ 136 ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕಯಲ್ಲಿ ಚುನಾಯಿತ ಪ್ರತಿನಿಧಿ ಅಧಿಕಾರ ಅವಧಿಯು ದಿನಾಂಕ: 10-09-2020ಕ್ಕೆ ಮುಕ್ತಾಯವಾಗಿದ್ದು, ಬಿ.ಬಿ.ಎಂ.ಪಿ ಪ್ರತಿ ವಾರ್ಡ್‌ಗೆ ನೋಡೆಲ್ ಅಧಿಕಾರಿ ನೇಮಕಾತಿ ಮತ್ತು ವಾರ್ಡ್ ಹಂತದ ಸಮಿತಿ ರಚಿಸಿದ್ದು. ವಾರ್ಡ್‌ಗೆ ಸಂಬಂಧಿಸಿದಂತೆ ಸಾರ್ವಜನಿಕರ ಹಿತರಕ್ಷಣೆ ಗಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಗೆ ಅಹ್ವಾನಿಸಿದ ಮಾನ್ಯ ಅಧ್ಯಕ್ಷರಿಗೆ ಮತ್ತು ಸಮಿತಿಯ ಸದಸ್ಯರುಗಳಿಗೆ ಸಮಿತಿಯ ಕಾರ್ಯದರ್ಶಿ ಸಭೆಗೆ ಸ್ವಾಗತ ಕೋರುತ್ತಾ ಸಮಿತಿಯ ಅಧ್ಯಕ್ಷರಾದ ಡಾ. ಅಲ್ಲಮಪ್ರಭು ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು ಹಾಗೂ ಈ ಹಿಂದಿನ ಸಭೆಯ ನಡಾವಳಿಯ ನಿರ್ಣಯಗಳ ಬಗ್ಗೆ ಕೈಗೊಂಡ ಕಾರ್ಯವನ್ನು ಪರಿಶೀಲಿಸಲಾಯಿತು.

ಅಧ್ಯಕ್ಷರು: ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಸಭೆಯಲ್ಲಿ ಹಾಜರಾಗಿರುವ ಎಲ್ಲ ಸದಸ್ಯರುಗಳಿಗೆ ಸಾರ್ವಜನಿಕರಿಂದ ಬಂದ ದೂರುಗಳ ಬಗ್ಗೆ ಹಾಗೂ ವಾರ್ಡ್ ವ್ಯಾಪ್ತಿಯ ಕುಂದುಕೊರತೆಗಳ ಬಗ್ಗೆ ಸಭೆಯಲ್ಲಿ ವಿವರಣೆ ನೀಡುವಂತೆ ತಿಳಿಸಿದರು.

ವಾರ್ಡ್ ಕಮೀಟಿಯ ಸದಸ್ಯರು ಮತ್ತು ಇತರೆ ಅಧಿಕಾರಿಗಳು ವಾರ್ಡ್ -136ರ ವ್ಯಾಪ್ತಿಯಲ್ಲಿ ಬಂದಿರುವ ದೂರುಗಳ ಬಗ್ಗೆ ಪ್ರಸ್ತಾಪಿಸಿ ಕೆಲವು ದೂರುಗಳನ್ನು ಇತ್ಯರ್ಥ ಮಾಡಿದ್ದು ಉಳಿದಿರುವ ದೂರುಗಳ ವಿವರಣೆಯನ್ನು ಸಭೆಯಲ್ಲಿ ನೀಡಿದರು

.....2

ಅಧ್ಯಕ್ಷರು: ಕಂದಾಯ ಪರಿವೀಕ್ಷಕರಿಗೆ 2020-21ನೇ ಸಾಲು ಮುಕ್ತಾಯ ಹಂತದಲ್ಲಿದ್ದು ಹೆಚ್ಚಿನ ಕಂದಾಯ ವಸೂಲು ಮಾಡುವಂತೆ ತಿಳಿಸಿದರು ಮತ್ತು 2021-22ನೇ ಸಾಲಿನಲ್ಲಿ ಏಪ್ರಿಲ್ ತಿಂಗಳಿನಲ್ಲಿ 5% ತೆರಿಗೆ ವಿನಾಯಿತಿಯ ಬಗ್ಗೆ ಸಭೆಯಲ್ಲಿ ವಿಷಯ ತಿಳಿಸುವಂತೆ ಕಂದಾಯ ಅಧಿಕಾರಿಗಳಲ್ಲಿ ಕೋರಿದುರು

ಕಂದಾಯ ಅಧಿಕಾರಿಗಳು ಸದರಿ ವಿಷಯದ ಬಗ್ಗೆ ವಿವರಣೆಯನ್ನು ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ವಾರ್ಡ್ ಮಟ್ಟದ ಕಮೀಟಿ ಸದಸ್ಯರಿಂದ ಘನತ್ಯಾಜ್ಯನಿರ್ವಹಣೆಯ ಬಗ್ಗೆ ವಾರ್ಡ್-136ರಲ್ಲಿ ಬ್ಲಾಕ್ ಸ್ಪಾರ್ಟ್‌ಗಳು ಮತ್ತು ಕಸ ವಿಂಗಡನೆ ಮತ್ತು ವಿಲೇವಾರಿಯ ಬಗ್ಗೆ ದೂರುಗಳು ಬಗ್ಗೆ ಸಭೆಯಲ್ಲಿ ವಿವರಣೆ ನೀಡುವಂತೆ ಕೋರಿದರು.

ಕಿರಿಯ ಆರೋಗ್ಯ ಪರಿವೀಕ್ಷಕರು ಸದರಿ ವಿಷಯದ ಬಗ್ಗೆ ವಿವರಣೆ ನೀಡುತ್ತ ಕಸ ವಿಲೇವರಿ ಮಾಡುವ ಕೇಂದ್ರಗಳಲ್ಲಿ ಕೆಲವು ಸಮಸ್ಯಗಳಗಿದ್ದು ಸರಿಪಡಿಸಿ ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು : ಪೌರ ಕಾರ್ಮಿಕರ ಮತ್ತು ಆಟೋಗಳ ಹಾಜರಾತಿ ಪುಸ್ತಕವನ್ನು ಪರಿಶೀಲನೆ ಮಾಡಿದರು ಹಾಗೂ ಮುಂದಿನ ಸಭೆಗೆ ಗುತ್ತಿಗೆದಾರರನ್ನು ಕರೆಸುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು

# ಹಾಜರಿದ್ದ ವಾರ್ಡ್ ಕಮಿಟಿ ಸದಸ್ಯರು

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಡಾ॥ ಅಲ್ಲಮಪ್ರಭು, ದೂ. 9480685654<br>ಸಹಾಯಕ ನಿರ್ದೇಶಕರು (ಪಶುಪಾಲನೆ ಪಶ್ಚಿಮ)<br>ಬಿ.ಬಿ.ಎಂ.ಪಿ. | ವಾರ್ಡ್‌ನ ನೋಡಲ್ ಅಧಿಕಾರಿ | 06/3/24 |
| 2 | ಶ್ರೀ ಸತೀಶ್ ಕುಮಾರ್<br>ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 136<br>ಬಿ.ಬಿ.ಎಂ.ಪಿ ದೂ. 9986740382 | ಸದಸ್ಯ ಕಾರ್ಯದರ್ಶಿ | Satish Kumar A 06/03/2 |
| 3 | ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157<br>ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ -136 | ಸದಸ್ಯರು | |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ)<br>ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ<br>ಶ್ರೀ ಬಾಬು (ಕೆಲಸ ಪರಿವೀಕ್ಷಕರು) 9342582372 | ಸದಸ್ಯರು | |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ<br>ಪ್ರತಿನಿಧಿ. ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157 | ಸದಸ್ಯರು | |
| 6 | ಶ್ರೀ ಉಮೇಶ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ<br>ಪ್ರತಿನಿಧಿ ದೂ. 873557760 | ಸದಸ್ಯರು | |
| 7 | ಶ್ರೀ ಮೊಹಮದ್ ಮುಜಾಮೀಲ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ<br>ಪ್ರತಿನಿಧಿ ದೂ. 7349649906 | ಸದಸ್ಯರು | |
| 8 | ಶ್ರೀಮತಿ ಚಂದ್ರಕಲಾ ದೂ. 8904845720<br>ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 136 | ಸದಸ್ಯರು | Kala RI |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ)<br>ರವರ ಪ್ರತಿನಿಧಿಎನ್ ಎನ್. ಲಕ್ಷ್ಮಿ ನರಸಿಂಹಯ್ಯ<br>ದೂ. 9845563157 | ಸದಸ್ಯರು | |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ<br>( ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ<br>ಹನುಮಂತ ರಾಜು 8618556909 | ಸದಸ್ಯರು | |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೆಸ್ಕಂ) ರವರ<br>ಪ್ರತಿನಿಧಿ | ಸದಸ್ಯರು | |

ಬಿ.ಬಿ.ಎಂ.ಪಿ., ಪಶ್ಚಿಮ 3ನೇ ಉಪ ವಿಭಾ...
ಗೋರಿಪಾಳ್ಯ, ಬೆಂಗಳೂರು-56002...

Satish Kumar A 06/03/2024
ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 136
ವಾರ್ಡ್ ಹಂತದ ಸಮಿತಿ

06/03/2024
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 136

ಪ್ರತಿಯನ್ನು

1. ಜಂಟಿ ಆಯುಕ್ತರು ಪಶ್ಚಿಮ ರವರ ಅವಗಾಹನೆಗೆ ಸಲ್ಲಿಸಿದೆ,
2. ಜಂಟಿ ಆಯುಕ್ತರು (ಹಣಕಾಸು) ರವರ ಅವಗಾಹನೆಗೆ ಸಲ್ಲಿಸಿದೆ,
3. ಮುಖ್ಯ ಅಭಿಯಂತರರು ಪಶ್ಚಿಮ ರವರ ಮಾಹಿತಿಗೆ ಸಲ್ಲಿಸಿದೆ,
4. ಕಛೇರಿ ಕಡತಕ್ಕೆ.